☞ ಸರ್ಕಾರಿ ಪ್ರೌಢ ಶಾಲೆಗಳಲ್ಲಿನ ಮುಖ್ಯ ಶಿಕ್ಷಕರ ಹುದ್ದೆಗಳನ್ನು ತುಂಬಲು ಈಗಾಗಲೇ ಲೋಕಸೇವಾ ಆಯೋಗದಿಂದ ನೇಮಕಾತಿಗೆ ಅಧಿಸೂಚನೆ ಹೊರಡಿಸಲಾಗಿದೆ.

☞ 'ಡಿ' ದರ್ಜೆ ನೌಕರರ ಹುದ್ದೆಯನ್ನು ಅನುಕಂಪದ ಆಧಾರದ ನೇಮಕಾತಿ ಮೂಲಕ ಭರ್ತಿ ಮಾಡಲಾಗುವುದು.

ಇ) ಅವಶ್ಯಕ ಮೂಲಭೂತ ಸೌಕರ್ಯಗಳಿಗೆ ಆರ್.ಐ.ಡಿ.ಎಫ್ 10 ಹಾಗೂ 12 ರಡಿಯಲ್ಲಿ ಅನುದಾನ ಒದಗಿಸಲಾಗಿದೆ. ಆರ್.ಐ.ಡಿ.ಎಫ್ –13 ರಡಿ ಕಾರ್ಯಕ್ರಮ ರೂಪಿಸಲಾಗುತ್ತಿದೆ. ಹಾಗೂ ಅನುದಾನ ಲಭ್ಯತೆಯ ಆಧಾರದ ಮೇಲೆ ಹಂತಹಂತವಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಡಲು ಕ್ರಮ ಕೈಗೊಳ್ಳಲಾಗುವುದು.

1562 (1903) ಶ್ರೀ ಸಿ. ಎಸ್. ನಾಡಗೌಡ (ಅಪ್ಪಾಜಿ) :– ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಾರಾಯಣಪೂರ ಜಲಾಶಯದ ಹಿನ್ನೀರು ಪ್ರದೇಶದಲ್ಲಿ ಹೆಚ್ಚುವರಿಯಾಗಿ ಮುಳುಗಡೆಯಾದ ಜಮೀನುಗಳ ವಿಸ್ತೀರ್ಣ ಎಷ್ಟು;

ಆ) ಮುಳುಗಡೆಯಿಂದ ತೊಂದರೆಗೀಡಾದ ರೈತರುಗಳಿಗೆ ನಿಗದಿಪಡಿಸಲಾದ ಎಲ್ಲಾ ಸೌಲಭ್ಯ ಪರಿಹಾರಗಳನ್ನು ನೀಡಲಾಗಿದೆಯೇ;

ಇ) ಇಲ್ಲವಾದಲ್ಲಿ, ಪರಿಹಾರ ನೀಡಿಕೆಯಲ್ಲಿನ ವಿಳಂಬಕ್ಕೆ ಕಾರಣಗಳೇನು;

ಈ) ಜಮೀನು ಮುಳುಗಡೆಯಿಂದಾಗಿ ಸಂಕಷ್ಟಕ್ಕೆ ಒಳಗಾಗಿರುವ ರೈತರಿಗೆ ತೀವ್ರಗತಿಯಲ್ಲಿ ಪರಿಹಾರ ಸೌಲಭ್ಯಗಳನ್ನು ನೀಡಲು ಸರ್ಕಾರ ಕ್ರಮ ಜರುಗಿಸುವುದೇ?

ಶ್ರೀ ಕೆ.ಎಸ್. ಈಶ್ವರಪ್ಪ (ಜಲ ಸಂಪನ್ಮೂಲ ಸಚಿವರು):

ಅ) ನಾರಾಯಣಪೂರ ಜಲಾಶಯ ಅಡಿ ಮುಳುಗಡೆಯಾದ ಪ್ರದೇಶದಲ್ಲಿ ಹೆಚ್ಚುವರಿಯಾಗಿ ಮುಳುಗಡೆಯಾದ ಬಗ್ಗೆ ಹಲವಾರು ಗ್ರಾಮದ ರೈತರು ಅರ್ಜಿಗಳನ್ನು ಸಲ್ಲಿಸುತ್ತಿರುವ ಹಿನ್ನೆಲೆಯಲ್ಲಿ ಪುನಃ ಎಫ್.ಆರ್.ಎಲ್. ಸರ್ವೆ ಕಾರ್ಯ ಕೈಗೊಂಡಿದ್ದು, ಮಾರ್ಚ್ 2007 ರೊಳಗಾಗಿ ಪೂರ್ಣಗೊಳ್ಳುವುದು. ಸರ್ವೆ ಮುಗಿದ ನಂತರ

ಹೆಚ್ಚುವರಿ ಮುಳುಗಡೆಯಾಗುವ ಜಮೀನುಗಳ ವಿಸ್ತೀರ್ಣ ಕುರಿತು ನಿಖರವಾದ ವಿವರ ಲಭ್ಯವಾಗುವುದು.

ಆ), ಇ) ಮತ್ತು ಈ) ಮುಳುಗಡೆಯಾಗುವ ಹೆಚ್ಚುವರಿ ಜಮೀನುಗಳ ವಿಸ್ತೀರ್ಣ ಲಭ್ಯವಾದ ನಂತರ ಅದಕ್ಕನುಗುಣವಾಗಿ ಭೂ ಸ್ವಾಧೀನ ಕಾಯ್ದೆಯಂತೆ ಭೂ ಸ್ವಾಧೀನ ಪ್ರಕ್ರಿಯೆ ಜರುಗಿಸುವ ಕುರಿತು ಪರಿಶೀಲಿಸಲಾಗುವುದು.

1564 (2231) ಶ್ರೀ ಚೆನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) :– ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜೀವ್ ಗಾಂಧಿ ವಸತಿ ಯೋಜನೆಯಡಿಯಲ್ಲಿ ಸೌಲಭ್ಯವನ್ನು ಪಡೆಯಲಿರುವ ಫಲಾನುಭವಿಗಳ ಪಟ್ಟಿಯನ್ನು ಪೂರ್ಣಗೊಳಿಸಲಾಗಿದೆಯೇ; (ಫಲಾನುಭವಿಗಳ ಜಿಲ್ಲಾವಾರು ಪಟ್ಟಿಯನ್ನು ನೀಡುವುದು)

ಆ) ವಿವಿಧ ವಸತಿ ಯೋಜನೆಗಳಡಿಯಲ್ಲಿ ರಾಜ್ಯದ ಎಷ್ಟು ಫಲಾನುಭವಿಗಳಿಗೆ ಪ್ರಸಕ್ತ ಸಾಲಿನಲ್ಲಿ ಮನೆ ಮತ್ತು ನಿವೇಶನಗಳನ್ನು ನೀಡಲು ಸರಕಾರ ಯೋಜನೆ ರೂಪಿಸಿದೆ.;

ಇ) ವಸತಿ ಯೋಜನೆಗಾಗಿ ಸರ್ಕಾರ ಬಿಡುಗಡೆಗೊಳಿಸಿದ ಹಣದ ಮೊತ್ತ ಎಷ್ಟು ?

ಶ್ರೀ ಡಿ.ಟಿ. ಜಯಕುಮಾರ್ (ವಸತಿ ಸಚಿವರು) :

ಅ) ರಾಜೀವ್ ಗಾಂಧಿ ಗ್ರಾಮೀಣ ವಸತಿ ಯೋಜನೆಯಡಿಯಲ್ಲಿ ವಸತಿ ಸೌಲಭ್ಯವನ್ನು ಪಡೆಯಲಿರುವ ಫಲಾನುಭವಿಗಳನ್ನು ಗುರುತಿಸುವ ಸಲುವಾಗಿ 2003 ರ ಜೂನ್ ಮಾಹೆಯಲ್ಲಿ ಎಲ್ಲಾ ವಸತಿ ರಹಿತರ ಮತ್ತು ನಿವೇಶನ ರಹಿತರ ಸಮೀಕ್ಷೆಯನ್ನು ಸ್ಥಳೀಯ ಸಂಸ್ಥೆಗಳ ಮೂಲಕ ಫಲಾನುಭವಿಗಳ ಪಟ್ಟಿಯನ್ನು ಪೂರ್ಣಗೊಳಿಸ ಲಾಗಿರುತ್ತದೆ.

ಸದರಿ ಫಲಾನುಭವಿಗಳ ಪಟ್ಟಿಯು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಲಭ್ಯವಿರುತ್ತದೆ. (ಜಿಲ್ಲಾವಾರು ವಿವರವನ್ನು ಅನುಬಂಧ –1 ರಲ್ಲಿ ನೀಡಲಾಗಿದೆ)

ಆ) ಪ್ರಸಕ್ತ ಸಾಲಿನಲ್ಲಿ ವಿವಿಧ ಯೋಜನೆಗಳಡಿ ನೀಡಿರುವ ಮನೆಗಳ ಮತ್ತು ನಿವೇಶನಗಳ ಗುರಿಯನ್ನು ಹಾಗೂ ಒದಗಿಸಿರುವ ಹಣವನ್ನು ಈ ಕೆಳಗೆ ತಿಳಿಸಿದೆ.